# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **653** |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 22-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆ ಜಾರಿಯಲ್ಲಿದ್ದರೂ ರಾಜ್ಯದ ಅನೇಕ ಗ್ರಾಮೀಣ ಮತ್ತು ಹಳ್ಳಿ ಪ್ರದೇಶದ ಜನರಿಗೆ ಹೆಚ್ಚಿನ ವಿದ್ಯುತ್ ಬಿಲ್‌ಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ ಎನರ್ಜಿ/164/ಪಿ.ಎಸ್.ಆರ್/ 2023 ದಿನಾಂಕ 05.06.2023 ರ ಅನ್ವಯ "ಗೃಹ ಜ್ಯೋತಿ ಯೋಜನೆ" ಯಡಿ ರಾಜ್ಯದಲ್ಲಿನ ಅರ್ಹ ಗೃಹ ಬಳಕೆ ಗ್ರಾಹಕರಿಗೆ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23 ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10ರಷ್ಟು ಹೆಚ್ಚಿನ ವಿದ್ಯುತ್ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು ಅರ್ಹ ಯೂನಿಟ್‌ಗಳಿಗೆ ಮೀರಿದ ಹಾಗೂ 200 ಯೂನಿಟ್‌ವರೆಗಿನ ಗ್ರಾಹಕರಿಗೆ ಅನರ್ಹ ಯೂನಿಟ್‌ಗಳಿಗೆ ಬಿಲ್ಲನ್ನು ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಕೆಲವು ಷರತ್ತುಗಳೊಂದಿಗೆ ದಿನಾಂಕ: 01.08.2023 ರಿಂದ ಅನ್ವಯವಾಗುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. |
| ಆ) | ರಾಜ್ಯದಲ್ಲಿ ಅನೇಕ ಹೋಬಳಿಗಳಲ್ಲಿ ಲೈನ್‌ಮ್ಯಾನ್‌ಗಳ (ಪವರ್‌ಮ್ಯಾನ್) ಕೊರತೆಯಿಂದ ಮಳೆಗಾಲದ ಸಮಯದಲ್ಲಿ ಸಣ್ಣಪುಟ್ಟ ಸಮಸ್ಯೆಗಳಿದ್ದರೂ 4 ರಿಂದ 5 ದಿನಗಳವರೆಗೆ ಕೆಲವು ಗ್ರಾಮಗಳಿಗೆ ವಿದ್ಯುತ್ ಪೂರೈಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು) | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಹಾಲಿ ಕಾರ್ಯನಿರತ ಸಿಬ್ಬಂದಿಗಳಿಂದಲೇ ನಿರಂತರ ವಿದ್ಯುತ್ ಪೂರೈಕೆ ಮಾಡಲು ಹಾಗೂ ಗ್ರಾಹಕರ ವಿದ್ಯುತ್ ಸಮಸ್ಯೆಗಳಿಗೆ ಸ್ಪಂದಿಸಿ ವಿದ್ಯುತ್ ಅಡಚಣೆಗಳನ್ನು ಸರಿಪಡಿಸಲು ಅಗತ್ಯ ಕ್ರಮಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕ ಸೇವೆಯಲ್ಲಿ ವ್ಯತ್ಯಯವುಂಟಾಗದಂತೆ ನೋಡಿಕೊಳ್ಳಲಾಗುತ್ತಿದೆ.<br><br>ದಿನಾಂಕ: 01.07.2024 ರ ಅಂತ್ಯಕ್ಕೆ ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಖಾಲಿ ಇರುವ ಕಿರಿಯ ಪವರ್‌ಮ್ಯಾನ್ ಹುದ್ದೆಗಳ ವಿವರ ಈ ಕೆಳಕಂಡಂತಿದೆ: |
| ಇ) | ರಾಜ್ಯದಲ್ಲಿ ಒಟ್ಟು ಎಷ್ಟು ಲೈನ್‌ಮ್ಯಾನ್ ಹುದ್ದೆಗಳು ಖಾಲಿ ಇವೆ; ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಜಿಲ್ಲಾವಾರು ಮಾಹಿತಿ ನೀಡುವುದು) | |

| ಕಂಪನಿ | ಮಂಜೂರಾದ ಹುದ್ದೆ | ಭರ್ತಿಯಾಗಿರುವ ಹುದ್ದೆ | ಖಾಲಿ ಹುದ್ದೆ |
|---|---|---|---|
| ಕವಿಪ್ರನಿನಿ | 408 | 180 | 228 |
| ಬೆಸ್ಕಾಂ | 4455 | 1925 | 2530 |
| ಸೆಸ್ಕ್ | 2879 | 1745 | 1134 |
| ಹೆಸ್ಕಾಂ | 3177 | 1551 | 1626 |
| ಮೆಸ್ಕಾಂ | 2510 | 1342 | 1168 |
| ಜೆಸ್ಕಾಂ | 2503 | 1734 | 769 |
| **ಒಟ್ಟು** | **15932** | **8477** | **7455** |

| | | |
|---|---|---|
| | | ಮುಂದುವರೆದು, ರಾಜ್ಯ ಸರ್ಕಾರವು ಪತ್ರ ಸಂಖ್ಯೆ ಎನರ್ಜಿ 54 ಇಇಬಿ 2024, ದಿನಾಂಕ: 04.07.2024ರಲ್ಲಿ 2000 ಕಿರಿಯ ಪವರ್‌ಮ್ಯಾನ್ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆಯನ್ನು ನೀಡಿದ್ದು, ಶೀಘ್ರದಲ್ಲಿಯೇ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಎನರ್ಜಿ 187 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು